ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1413 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ರಾಮೋಜಿಗೌಡ<br>(ಪದವೀಧರ ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | 16.03.2026 |
| 4) | ಉತ್ತರಿಸುವವರು | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಪ್ರಶ್ನೆ | ಉತ್ತರ |
|---|---|
| (ಅ) ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳ ವ್ಯಾಪ್ತಿಯಲ್ಲಿ ನಿರುದ್ಯೋಗ ಸಮಸ್ಯೆಯಿಂದ ಬಾಧಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| (ಆ) ಬಂದಿದ್ದಲ್ಲಿ, ನಿರುದ್ಯೋಗ ನಿವಾರಣೆಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು; | <u>**ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ**</u><br>ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯಿಂದ ನಿರುದ್ಯೋಗಿ ಯುವಕರಿಗೆ ಉದ್ಯೋಗಾವಕಾಶ ಒದಗಿಸಲು ಜಿಲ್ಲಾ ಮಟ್ಟದಲ್ಲಿ ಮಿನಿ ಉದ್ಯೋಗಮೇಳ / ನೇರ ಸಂದರ್ಶನ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. 2025-26 ನೇ ಸಾಲಿನಲ್ಲಿ ಬೆಂಗಳೂರು ನಗರದಲ್ಲಿ 6 ನೇರ ಸಂದರ್ಶನ / ಮಿನಿ ಉದ್ಯೋಗ ಮೇಳಗಳನ್ನು ಆಯೋಜಿಸಿದ್ದು, ಆ ಮೂಲಕ 203 ಅಭ್ಯರ್ಥಿಗಳು ಉದ್ಯೋಗ ಆಹ್ವಾನ ಪತ್ರ ಪಡೆದಿರುತ್ತಾರೆ.<br><u>**ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ – (ಕೆ.ಎಸ್.ಡಿ.ಸಿ.)**</u><br>ನಿರುದ್ಯೋಗಿಗಳ ಕೌಶಲ್ಯಾಭಿವೃದ್ಧಿಗೊಳಿಸಿ, ಉದ್ಯೋಗಕ್ಕಾಗಿ ಸಜ್ಜುಗೊಳಿಸಲು ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ವತಿಯಿಂದ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>1. <u>**ಕೌಶಲ್ಯನೀತಿ**</u> : ಕೌಶಲ್ಯಾಭಿವೃದ್ಧಿಯ ಪ್ರಕ್ರಿಯೆಗಳನ್ನು ಏಕರೂಪಗೊಳಿಸುವ ನಿಟ್ಟಿನಲ್ಲಿ ಎಲ್ಲಾ ಭಾಗಿದಾರರನ್ನು ಒಳಗೊಂಡಂತೆ ನೀತಿಯನ್ನು ರೂಪಿಸಲಾಗಿದೆ.<br>2. <u>**ಸಿ.ಎಂ.ಕೆ.ಕೆ.ವೈ 2.0**</u> : ಯೋಜನೆಯ ಪರಿಣಾಮಕಾರಿಯಾಗಿ ಹಾಗೂ ತ್ವರಿತವಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಆಯವ್ಯಯ ಘೋಷಣೆಯಂತೆ ಕ್ರಮವಹಿಸಲಾಗುತ್ತಿದೆ.<br>3. <u>**Industry Linkage Cell ಮತ್ತು Future Skills**</u> : ಯುವಕರಿಗೆ ಭವಿಷ್ಯದ ಕೌಶಲ್ಯ (Future Skills) ತರಬೇತಿಗಳನ್ನು ಕೈಗಾರಿಕಾ ಆಧಾರಿತ ಬೇಡಿಕೆ ಅನುಸಾರ ನೀಡುವುದು ಹಾಗೂ ಉದ್ಯೋಗಾವಕಾಶ ಒದಗಿಸುವುದು. |

| | |
|---|---|
| | 4. **ಕರ್ನಾಟಕ ಸ್ಕಿಲ್ ಒಲಂಪಿಕ್ಸ್** : ಅಂತರಾಷ್ಟ್ರೀಯ ಕೌಶಲ್ಯ ಸ್ಪರ್ಧೆಗೆ ಹಾಗೂ ರಾಷ್ಟ್ರೀಯ ಕೌಶಲ್ಯ ಸ್ಪರ್ಧೆಗೆ ಪೂರಕವಾಗಿ ಕೌಶಲ್ಯ ಒಲಂಪಿಕ್ಸ್ ಮೂಲಕ ರಾಜ್ಯದ ಯುವಜನತೆಗೆ ಸ್ಪರ್ಧೆಯಲ್ಲಿ ಭಾಗವಹಿಸಲು ಪ್ರೇರೇಪಿಸುವುದು.<br>5. **ವಿದೇಶಿ ಭಾಷಾ ತರಬೇತಿ** : ಅಂತರಾಷ್ಟ್ರೀಯ ಮಟ್ಟದಲ್ಲಿ ವಿವಿಧ ಉದ್ಯೋಗಾವಕಾಶಗಳನ್ನು ಪಡೆಯಲು ಜರ್ಮನ್, ಇಂಗ್ಲೀಷ್, ಸ್ಪ್ಯಾನಿಷ್ ಹಾಗೂ ಇತರೆ ಭಾಷೆಗಳಲ್ಲಿ ತರಬೇತಿ ನೀಡಲು ಕ್ರಮವಹಿಸಲಾಗುತ್ತಿರುತ್ತದೆ.<br>6. **ಕಲಿಕೆ ಜೊತೆ ಕೌಶಲ್ಯ** : ಪದವಿ ತರಗತಿಗಳಲ್ಲಿ ಕೌಶಲ್ಯ ಸುಧಾರಿತ ಕಲಿಕೆ ಜೊತೆ ಕೌಶಲ್ಯ ಕಾರ್ಯಕ್ರಮದಡಿ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ 50 ಗಂಟೆಗಳ ಕೈಗಾರಿಕಾ ಆಧಾರಿತ ತರಬೇತಿ ನೀಡಲಾಗುತ್ತಿದೆ.<br>7. **ಉದ್ಯೋಗ ಮೇಳ** : ರಾಜ್ಯ ವಿವಿಧ ಜಿಲ್ಲೆಗಳಲ್ಲಿ ಉದ್ಯೋಗ ಮೇಳ ಆಯೋಜಿಸುವ ಮುಖೇನ ಒಂದೇ ವೇದಿಕೆಯಡಿ ಉದ್ಯೋಗದಾತರನ್ನು ಹಾಗೂ ಉದ್ಯೋಗಾಕಾಂಕ್ಷಿಗಳನ್ನು ಒಟ್ಟುಗೂಡಿಸಿ, ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗಾವಕಾಶ ಕಲ್ಪಿಸಲು ಕ್ರಮವಹಿಸಲಾಗಿದೆ.<br>8. **ಪಾರಂಪರಿಕ ಮತ್ತು ಪ್ರಾದೇಶಿಕ ಕೌಶಲ್ಯ ತರಬೇತಿ ಕಾರ್ಯಕ್ರಮ** : ಪ್ರಸಕ್ತ ಸಾಲಿನ ಆಯವ್ಯಯ ಘೋಷಣೆಯಂತೆ ಅಳಿವಿನಂಚಿನಲ್ಲಿರುವ ಪಾರಂಪರಿಕ ಮತ್ತು ಪ್ರಾದೇಶಿಕ ಕೌಶಲ್ಯಗಳನ್ನು ಮುಂದಿನ ಪೀಳಿಗೆಗೆ ತಲುಪಿಸಲು ಅಗತ್ಯವಿರುವ ಟೂಲ್‌ಕಿಟ್‌ಗಳೊಂದಿಗ ಅಲ್ಪಾವಧಿ ತರಬೇತಿಯನ್ನು ನೀಡಲು ಕ್ರಮವಹಿಸಲಾಗಿದ.<br>9. **ಲಂಬಾಣಿ ಜನಾಂಗದ ಕಸೂತಿ ಕಲೆಯ ಕೌಶಲ್ಯ ತರಬೇತಿ ಕಾರ್ಯಕ್ರಮ** : ಪ್ರಸಕ್ತ ಸಾಲಿನ ಆಯವ್ಯಯ ಘೋಷಣೆಯಂತೆ ಲಂಬಾಣಿ ಜನಾಂಗದ ಕಸೂತಿ ಕಲೆಯ ಬಗ್ಗೆ ತರಬೇತಿಯನ್ನು ಕೌಶಲ್ಯ ತರಬೇತಿ ಕೇಂದ್ರಗಳ ಮುಖೇನ ಅನುಷ್ಠಾನಗೊಳಿಸಲಾಗಿದೆ<br><br>**ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಸಂಜೀವಿನಿ- ಕೆ ಎಸ್ ಆರ್ ಎಲ್ ಪಿ ಎಸ್ ಸಂಸ್ಥೆ / (DAY-NRLM)**<br><br>ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಂಜೀವಿನಿ-ಕೆಎಸ್‌ಆರ್‌ಎಲ್ ಪಿಎಸ್ ಸಂಸ್ಥೆಯ ಮೂಲಕ ಬೆಂಗಳೂರು ನಗರ ಜಿಲ್ಲೆಯ ಗ್ರಾಮೀಣ ಪ್ರದೇಶಗಳು ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವ್ಯಾಪ್ತಿಯಲ್ಲಿನ ಗ್ರಾಮೀಣ ನಿರುದ್ಯೋಗಿ ಯುವಕ/ಯುವತಿಯರಿಗೆ ಕೌಶಲ್ಯ ತರಬೇತಿ ಹಾಗೂ ಉದ್ಯೋಗ ಮತ್ತು ಸ್ವಉದ್ಯೋಗ ಒದಗಿಸಲು ಈ ಕೆಳಗಿನ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br><br>• **ದೀನದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆಯಡಿಯ** ಯೋಜನಾ ಅನುಷ್ಠಾನ ಸಂಸ್ಥೆಗಳ ಮೂಲಕ ಗ್ರಾಮೀಣ ಭಾಗದ 18 ರಿಂದ 35 ವಯೋಮಾನದ ಯುವಕ/ಯುವತಿಯರಿಗೆ ವಿವಿಧ ಕೌಶಲ್ಯಾಭಿವೃದ್ಧಿ ತರಬೇತಿಗಳನ್ನು ನೀಡಿ ವೇತನಾಧಾರಿತ ಉದ್ಯೋಗಗಳನ್ನು ಒದಗಿಸಲಾಗುತ್ತಿದೆ. |

| | |
|---|---|
| | • **ಗ್ರಾಮೀಣ ಸ್ವ-ಉದ್ಯೋಗ ತರಬೇತಿ** ಕೇಂದ್ರ ಯೋಜನೆಯಡಿ ಗ್ರಾಮಾಂತರ ಪ್ರದೇಶದಲ್ಲಿನ 18 ರಿಂದ 50 ವಯೋಮಾನದ ಯುವಕ/ ಯುವತಿಯರಿಗೆ ವಿವಿಧ ವೃತ್ತಿಗಳಡಿ ಸ್ವಉದ್ಯೋಗ ತರಬೇತಿಗಳನ್ನು ಒದಗಿಸಿ ಸ್ವ-ಉದ್ಯೋಗ ಹೊಂದಲು ಬೆಂಬಲಿಸಲಾಗುತ್ತಿದೆ.<br>• ಸದರಿ ಜಿಲ್ಲೆಗಳಲ್ಲಿ ದೀನ್ ದಯಾಳ್ ಗ್ರಾಮೀಣ ಕೌಶಲ್ಯ ಯೋಜನೆಯಡಿ ಜಿಲ್ಲಾ ಮಟ್ಟದ ಉದ್ಯೋಗ ಮೇಳಗಳನ್ನು ಆಯೋಜಿಸಿ ನಿರುದ್ಯೋಗ ನಿವಾರಣೆಗೆ ಕ್ರಮಕೈಗೊಳ್ಳಲಾಗುತ್ತಿದೆ.<br><br>**<u>ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್)</u>**<br><br>ನಿರುದ್ಯೋಗದ ಸಮಸ್ಯೆಯನ್ನು ನಿವಾರಿಸಲು ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್) ಸಂಸ್ಥೆಯಿಂದ ಉದ್ಯಮಶೀಲತಾಭಿವೃದ್ಧಿ ತರಬೇತಿಗಳನ್ನು ಹಮ್ಮಿಕೊಂಡು ಸ್ವ-ಉದ್ಯೋಗ ಕೈಗೊಳ್ಳಲು ಪ್ರೇರೇಪಿಸಲಾಗುತ್ತಿದೆ. |
| ಇ) ಈ ಬಗ್ಗೆ ಸಮೀಕ್ಷೆ ನಡೆಸಿ ಸರ್ಕಾರ ಪರಿಹಾರೋಪಾಯಗಳನ್ನು ಕೈಗೊಳ್ಳುವುದೇ? (ಮಾಹಿತಿ ನೀಡುವುದು) | ಅನ್ವಯಿಸುವುದಿಲ್ಲ. |

ಸಂಖ್ಯೆ: ಕೌಉಜೀಇ 11 ಕೌಗುಪ್ರ 2026

(ಡಾ. ಶರಣಪ್ರಕಾಶ ಆರ್ ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಸಚಿವರು.